ದಿನಾಂಕ: 20.07.2022 ರಂದು ಬೆಳಗ್ಗೆ 11.00 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಹೆಚ್.ವಿ. ಅಶ್ವತ್ಥ, ನೋಡಲ್ ಅಧಿಕಾರಿಗಳು
2. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
3. ಶ್ರೀ ರಘು, ಜೆ.ಹೆಚ್.ಐ.
4. ಶ್ರೀ ಕುಮಾರ್. ಕಂದಾಯ ನಿರೀಕ್ಷಕರು
5. ಶ್ರೀ ರಮೇಶ್. ಪಶು ಇಲಾಖೆ
6. ಶ್ರೀ ಸುರೇಶ್ ಗಡುಗೋಳಿ
7. ಶ್ರೀ ಶ್ರೀನಿವಾಸ್, ಸದಸ್ಯರು
8. ಶ್ರೀ ಆನಂದ್, ಸದಸ್ಯರು

ದಿನಾಂಕ: 20.07.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ವಾರ್ಡ್ ಕಮಿಟಿ ಸದಸ್ಯರು ವಾರ್ಡ್ ನಂ. 107 ಮತ್ತು 101 ವಾರ್ಡ್‌ಗಳ ಕಸ ವಿಲೇವಾರಿ ಘಟಕಗಳನ್ನು ಹಾಲಿ ಇರುವ ವಾರ್ಡ್ ನಂ. 99ರ ಕಸದ ಘಟಕದ ಪಕ್ಕ ಮಾಡಬೇಕ್ಕೆನ್ನುವ ಬೇರೆ ವಾರ್ಡಿನ ಪ್ರಸ್ತಾಪಗಳನ್ನು ಸಭೆಯ ಸದಸ್ಯರೆಲ್ಲರು ಸರ್ವಾನು ಮತದಿಂದ ವಿರೋದ ಪಡಿಸಿದರು.

2. ವಾರ್ಡ್ ಸದಸ್ಯರು ವಿಶ್ವೇಶ್ವರಯ್ಯ ವಾಣಿಜ್ಯ ಸಂಕೀರ್ಣದಲ್ಲಿ ಪಾರ್ಕಿಂಗ್ ಸಮಸ್ಯೆಯಿಂದ ತುಂಬಾ ತೊಂದರೆ ಉಂಟಾಗಿದ್ದು, ಅದನ್ನು ಸರಿಪಡಿಸುವಂತೆ ನೋಡಲ್ ಅಧಿಕಾರಿಗಳಿಗೆ ಕೇಳಿಕೊಂಡರು, ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

3. ನೋಡಲ್ ಅಧಿಕಾರಿಗಳು ಮಂಜುನಾಥನಗರ 1ನೇ ಮುಖ್ಯ ರಸ್ತೆಯಲ್ಲಿ ಬಾಕಿ ಉಳಿದಿರುವ ಸುಮಾರು 50.00 ಮೀ. ರಸ್ತೆಗೆ ಡಾಂಬರೀಕರಣ ಕಾಮಗಾರಿಯನ್ನು ಬೇಗನೆ ಕೈಗೊಳ್ಳಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ಪ್ರತಿ ನಿತ್ಯ ಮಳೆ ಬೀಳುತ್ತಿದ್ದು, ಮಳೆ ನಿಂತ ಮೇಲೆ ಡಾಂಬರೀಕರಣ ಕಾಮಗಾರಿ ಕೈಗೊಳ್ಳಲಾಗುವುದೆಂದು ತಿಳಿಸಿದರು.
4. ನಾಡಿಗರ್ ಕಾಲೇಜ್ ಹತ್ತಿರವಿರುವ ಬಿ.ಬಿ.ಎಂ.ಪಿ. ಕಟ್ಟಡವನ್ನು ಹಸ್ತಾಂತರಿಸುವ ಬಗ್ಗೆ ವಾರ್ಡ್ ಸದಸ್ಯರು ಚರ್ಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ಈಗಾಗಲೇ ಕಟ್ಟಡದ ಕೀ ಅನ್ನು ಸಂಬಂಧಪಟ್ಟವರಿಗೆ ತಲುಪಿಸಿರುವುದಾಗಿ ತಿಳಿಸಿದರು.
5. ಸಿಲ್ಟ್ ಅಂಡ್ ಟ್ರಾಕ್ಟರ್ ಬಗ್ಗೆ ವಾರ್ಡ್ ಸಭೆಯಲ್ಲಿ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ವಾರ್ಡ್ ನಂ 99 ಸಹಾಯಕ ಅಭಿಯಂತರರು ರವರು ವಾರ್ಡ್ ಸದಸ್ಯರ ಸೂಚನೆ ಮೇರೆಗೆ ಕಾಮಗಾರಿಯನ್ನು ಕೈಗೊಳ್ಳುತ್ತಿದೆ ಎಂದು ತಿಳಿಸಿದರು.
6. ವಾರ್ಡಿನ ಸದಸ್ಯರುಗಳು ವಾರ್ಡಿನ ಕೆಲವು ರಸ್ತೆಗಳಲ್ಲಿ ಮರದ ಕೊಂಬೆಗಳು ನೇತಾಡುತ್ತಿದ್ದು, ಅದನ್ನು ತುರ್ತಾಗಿ ತೆರವುಗೊಳಿಸುವಂತೆ ಅರಣ್ಯಾಧಿಕಾರಿಗಳಿಗೆ ತಿಳಿಸುವಂತೆ ಕೋರಿದರು. ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿಗಳು ವಾರ್ಡಿನ ಅಭಿಯಂತರರಿಗೆ ಸೂಚಿಸಿದರು.

7. ವಾರ್ಡ್ ಸದಸ್ಯರು ವಾರ್ಡ್ ವ್ಯಾಪ್ತಿಯಲಿ ಬರುವ ಬಾಕಿ ಇರುವ ರಸ್ತೆಗಳಿಗೆ ಬೇಗ ಡಾಂಬರೀಕರಣ ಮಾಡಬೇಕೆಂದು ಕೋರಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಕಾಮಗಾರಿ ಕೈಗೊಳ್ಳಲು ಸಾಧ್ಯವಾಗದ ಕಾರಣ ಮಳೆ ನಿಂತ ಮೇಲೆ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99